ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

2

ಇಲಾಖೆ / ವಿಷಯ : DEPARTMENT / SUBJECT: [illegible]

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ

ದಿನಾಂಕ : DATE : 06/08/2020

# ಪರಿಸರ ಪರಿಣಾಮ: ಅಧಿಸೂಚನೆಗೆ ನಿರ್ಬಂಧ

ಪ್ರಜಾವಾಣಿ ವಾರ್ತೆ 6-8-2020

ಬೆಂಗಳೂರು: 'ಪರಿಸರದ ಮೇಲಿನ ಪರಿಣಾಮ ಅಧ್ಯಯನ-2020' ಅಂತಿಮ ಅಧಿಸೂಚನೆಯನ್ನು ಕೇಂದ್ರ ಪರಿಸರ ಸಚಿವಾಲಯವು ಸೆಪ್ಟೆಂಬರ್ 7ರವರೆಗೆ ಪ್ರಕಟಿಸದಂತೆ ಹೈಕೋರ್ಟ್ ನಿರ್ಬಂಧಿಸಿದೆ.

'ಕೋವಿಡ್ ಇರುವ ಕಾರಣ ಕರಡು ಅಧಿಸೂಚನೆಗೆ ಆಕ್ಷೇಪಣೆ ಸಲ್ಲಿಸಲು ಸಾರ್ವಜನಿಕರಿಗೆ ಅವಕಾಶ ಸಿಕ್ಕಿಲ್ಲ. ಕಾಲಾವಕಾಶ ನೀಡಿ ನಂತರ ಪ್ರಕ್ರಿಯೆ ಮುಂದುವರಿಸಬೇಕು' ಎಂದು ಮುಖ್ಯ ನ್ಯಾಯಮೂರ್ತಿ ಎ.ಎಸ್. ಓಕಾ ಮತ್ತು ನ್ಯಾಯಮೂರ್ತಿ ಅಶೋಕ್ ಎಸ್. ಕಿಣಗಿ ಅವರಿದ್ದ ವಿಭಾಗೀಯ ಪೀಠ ಹೇಳಿದೆ.

'ಲಾಕ್‌ಡೌನ್‌ಗೆ ಎರಡು ದಿನ ಮುನ್ನ (ಮಾರ್ಚ್ 23ರಂದು) ಕರಡು ಅಧಿಸೂಚನೆ ಪ್ರಕಟಿಸಲಾಗಿದೆ. ಅದು ಹಿಂದಿ ಮತ್ತು ಇಂಗ್ಲಿಷ್‌ನಲ್ಲಿದ್ದು, ಅದನ್ನು ಸ್ಥಳೀಯ ಭಾಷೆಗಳಲ್ಲೂ ಪ್ರಕಟಿಸಿ ಆಕ್ಷೇಪಣೆ ಸಲ್ಲಿಸಲು ಅವಕಾಶ ನೀಡಬೇಕು ಎಂದು ಕೇಂದ್ರ ಪರಿಸರ ಸಚಿವಾಲಯಕ್ಕೆ ನಿರ್ದೇಶನ ನೀಡಬೇಕು' ಎಂದು ಕೋರಿ ಯುನೈಟೆಡ್ ಕನ್ಸರ್ವೇಷನ್ ಮೂವ್‌ಮೆಂಟ್ ಚಾರಿಟಬಲ್ ಮತ್ತು ವೆಲ್ಫೇರ್ ಟ್ರಸ್ಟ್ ಸಾರ್ವಜನಿಕ ಹಿತಾಸಕ್ತಿ ಅರ್ಜಿ ಸಲ್ಲಿಸಿತ್ತು.

'ಕರಡಿನ ಬಗ್ಗೆ ವ್ಯಾಪಕ ಪ್ರಚಾರ ನೀಡಲು ಸಂಬಂಧಪಟ್ಟ ರಾಜ್ಯ ಪ್ರಾಧಿಕಾರಕ್ಕೆ ನಿರ್ದೇಶನ ನೀಡಲಾಗಿದೆ' ಎಂದು ಕೇಂದ್ರ ಸರ್ಕಾರದ ಪರ ವಕೀಲರು ತಿಳಿಸಿದರು.

'ಕನ್ನಡದಲ್ಲಿ ಪ್ರಚಾರ ನೀಡಿರುವ ಬಗ್ಗೆ ಯಾವುದೇ ದಾಖಲೆಗಳನ್ನು ಪ್ರಸ್ತುತ ಪಡಿಸಿಲ್ಲ. ಸ್ಥಳೀಯ ಭಾಷೆಯಲ್ಲಿ ಪ್ರಚಾರ ನೀಡದೆ ಅಂತಿಮ ವರದಿ ಪ್ರಕಟಿಸಬಾರದು' ಎಂದು ಪೀಠ ಸೂಚಿಸಿತು.

## ಗ್ರಾಮ ಪಂಚಾಯಿತಿ ಚುನಾವಣೆ: 21 ಜಿಲ್ಲೆಗಳ ಮೀಸಲಾತಿ ಪಟ್ಟಿ ಸಿದ್ಧ

ಬೆಂಗಳೂರು: ಬರಲಿರುವ ಗ್ರಾಮ ಪಂಚಾಯಿತಿ ಚುನಾವಣೆಗೆ ಸಂಬಂಧಿಸಿದ 21 ಜಿಲ್ಲೆಗಳ ಮೀಸಲಾತಿ ಪಟ್ಟಿಯನ್ನು ರಾಜ್ಯ ಸರ್ಕಾರ ಹೈಕೋರ್ಟ್‌ಗೆ ಬುಧವಾರ ಸಲ್ಲಿಸಿದೆ. ಉಳಿದ 9 ಜಿಲ್ಲೆಗಳ ಮೀಸಲಾತಿ ಪಟ್ಟಿ ಅಂತಿಮಗೊಳಿಸಲು ಆ.24ರವರೆಗೂ ಅಲ್ಲಿನ ಜಿಲ್ಲಾಧಿಕಾರಿಗಳು ಸಮಯ ಕೇಳಿದ್ದಾರೆ ಎಂದು ರಾಜ್ಯ ಚುನಾವಣಾ ಆಯೋಗದ ವಕೀಲರು ನ್ಯಾಯಾಲಯಕ್ಕೆ ಮಾಹಿತಿ ನೀಡಿದರು.

'ಗ್ರಾಮ ಪಂಚಾಯಿತಿ ಚುನಾವಣೆಯನ್ನು ತಾತ್ಕಾಲಿಕವಾಗಿ ಮುಂದೂಡಿ ಮೇ 28ರಂದು ರಾಜ್ಯ ಚುನಾವಣಾ ಆಯೋಗ ಹೊರಡಿಸಿರುವ ಅಧಿಸೂಚನೆಗೆ ಸಾಂವಿಧಾನಿಕ ಸಿಂಧುತ್ವ ಇಲ್ಲ' ಎಂದು ಆಕ್ಷೇಪಿಸಿ ವಿಧಾನ ಪರಿಷತ್ತಿನ ಸದಸ್ಯ ಕೆ.ಸಿ. ಕೊಂಡಯ್ಯ ಮತ್ತು ಇತರರು ಸಲ್ಲಿಸಿರುವ ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು ಮುಖ್ಯ ನ್ಯಾಯಮೂರ್ತಿ ಎ.ಎಸ್. ಓಕಾ ನೇತೃತ್ವದ ವಿಭಾಗೀಯ ಪೀಠ ವಿಚಾರಣೆ ನಡೆಸಿತು.

'ಸೆಪ್ಟೆಂಬರ್ ಮೊದಲ ವಾರದಲ್ಲಿ ಮತದಾರರ ಪಟ್ಟಿ ಸಿದ್ಧವಾಗಲಿವೆ' ಎಂದು ಆಯೋಗ ತಿಳಿಸಿತು. 'ಮೀಸಲಾತಿ ಪಟ್ಟಿ ಸಿದ್ಧ ಇರುವ 21 ಜಿಲ್ಲೆ ಗಳ ಚುನಾವಣೆಯನ್ನು ಮೊದಲ ಹಂತದಲ್ಲಿ ನಡೆಸಲು ವೇಳಾಪಟ್ಟಿ ಘೋಷಣೆ ಮಾಡಲು ಆಯೋಗಕ್ಕೆ ನಿರ್ದೇಶನ ನೀಡಬೇಕು' ಎಂದು ಅರ್ಜಿದಾರರ ಪರ ವಕೀಲರು ಮನವಿ ಮಾಡಿದರು.

'ಹಂತ ಹಂತವಾಗಿ ಚುನಾವಣಾ ದಿನಾಂಕ ಘೋಷಣೆ ಮಾಡಲು ಆಗುವುದಿಲ್ಲ' ಎಂದು ಆಯೋಗದ ಪರ ವಕೀಲರು ತಿಳಿಸಿದರು. ವಿಚಾರಣೆಯನ್ನು ಆಗಸ್ಟ್ 27ಕ್ಕೆ ಪೀಠ ಮುಂದೂಡಿತು.